UASB LIBRARY
Newspaper Clippings
Pg .1 Tuesday 27-04-2021 Jai Kisan



ಕೊರೊನಾ ಕಷ್ಟಕ್ಕೆ ತಂಪು ತಂದ ಕೃಷಿ

4 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ । ಉತ್ತಮ ಮಳೆಯದ್ದೂ ನಿರೀಕ್ಷೆ

• ಶಂಕರ ಪಾಗೋಜಿ

ಬೆಂಗಳೂರು: ಒಂದು ಕಡೆ ಉತ್ತಮ ಮುಂಗಾರು ನಿರೀಕ್ಷೆ ಮತ್ತೊಂದು ಕಡೆ ನಗರ ಬಿಟ್ಟು ಸ್ವಗ್ರಾಮಗಳತ್ತ ಹೋಗಿರುವ ಜನ... ಈ ಎರಡು ಕಾರಣಗಳಿಂದಾಗಿ ಕಳೆದ ವರ್ಷದಂತೆಯೇ ಈ ವರ್ಷವೂ ಕೃಷಿ ಕ್ಷೇತ್ರದಲ್ಲಿ ದಾಖಲೆ ಪ್ರಮಾಣದಲ್ಲಿ ಕೃಷಿ ಚಟುವಟಿಕೆ ನಡೆದು, ಹೆಚ್ಚಿನ ಉತ್ಪಾದನೆಯಾಗುವ ನಿರೀಕ್ಷೆ ಇರಿಸಿಕೊಳ್ಳಲಾಗಿದೆ.

ಈ ವರ್ಷವೂ ಲಾಕ್‌ಡೌನ್ ಆತಂಕದಲ್ಲಿ ನಗರ ಪ್ರದೇಶಗಳಿಂದ ಜನರು ಗ್ರಾಮಗಳಿಗೆ ವಲಸೆ ಹೋಗಿದ್ದಾರೆ. ಅಲ್ಲದೆ, ಉತ್ತಮ ಮಳೆಯಾಗುವ ಮುನ್ಸೂಚನೆಯನ್ನು ಹವಾಮಾನ ಇಲಾಖೆ ನೀಡಿದೆ. ಈಗಾಗಲೇ ಉತ್ತಮ ರೀತಿಯಲ್ಲಿ ಮುಂಗಾರು ಪೂರ್ವ ಮಳೆ ಆರಂಭವಾಗಿದೆ. ಹೀಗಾಗಿ, ಪ್ರಸಕ್ತ ವರ್ಷ ಸುಮಾರು 4 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗುವ ಸಾಧ್ಯತೆ ಇದೆ. ಇದರಿಂದಾಗಿ ಹೆಚ್ಚಿನ ಪ್ರಮಾಣದಲ್ಲಿ ಬೆಳೆ ತೆಗೆವ ನಿರೀಕ್ಷೆ ಇದೆ.



ಈ ವರ್ಷ ಮುಂಗಾರು ಉತ್ತಮವಾಗಿ ಆರಂಭವಾಗಿದೆ. ಲಾಕ್‌ಡೌನ್ ಆತಂಕದಲ್ಲಿ ಜನರು ಹಳ್ಳಿಗಳಿಗೆ ತೆರಳುತ್ತಿದ್ದಾರೆ. ಈ ವರ್ಷವೂ ಬಿತ್ತನೆ ಹೆಚ್ಚಾಗುವ ನಿರೀಕ್ಷೆಯಿದೆ. ಉತ್ಪಾದನೆಯೂ ಕಳೆದ ವರ್ಷಕ್ಕಿಂತ ಹೆಚ್ಚಿಗೆಯಾಗುವ ಸಾಧ್ಯತೆ ಇದೆ.
• ಬಿ.ಸಿ. ಪಾಟೀಲ್, ಕೃಷಿ ಸಚಿವ

ಗುರಿ ಮೀರಿದ ಉತ್ಪಾದನೆ: ಕಳೆದ ವರ್ಷ ನಗರಗಳಲ್ಲಿದ್ದ ಲಕ್ಷಾಂತರ ಮಂದಿ ಊರಿನತ್ತ ತೆರಳಿ ಕೃಷಿ ಕಾರ್ಯದಲ್ಲಿ ತೊಡಗಿಸಿಕೊಂಡಿದ್ದರು. ಇದರಿಂದಾಗಿಯೇ ಇಡೀ ದೇಶದಲ್ಲಿ ಕೃಷಿ ವಲಯದಲ್ಲಿ ಮಾತ್ರ ಧನಾತ್ಮಕ ಪ್ರಗತಿ ಕಂಡಿತ್ತು. ▸ 5ನೇ ಪುಟಕ್ಕೆ

140 ಲಕ್ಷ ಮೆಟ್ರಿಕ್ ಟನ್ ಕಳೆದ ವರ್ಷ ರಾಜ್ಯದಲ್ಲಿ ಉತ್ಪಾದನೆಯಾದ ಆಹಾರ

150 ಲಕ್ಷ ಮೆಟ್ರಿಕ್ ಟನ್: ಆಹಾರ ಉತ್ಪಾದನೆ ನಿರೀಕ್ಷೆ

110 ಹೆಕ್ಟೇರ್: ಈ ವರ್ಷದ ಬಿತ್ತನೆ ಗುರಿ

ಕೊರೊನಾ ಕಷ್ಟಕ್ಕೆ ತಂಪು ತಂದ ಕೃಷಿ

1ನೇ ಪುಟದಿಂದ ▸ ಈಗ ಮತ್ತೆ ಮುಂಗಾರು ಎದುರಾಗುವ ಸಂದರ್ಭ ಬರುತ್ತಿದೆ. ಹಾಗೆಯೇ, ಮುಂಗಾರು ಪೂರ್ವ ಮಳೆಯೂ ಚೆನ್ನಾಗಿ ಆಗುತ್ತಿದೆ. ಹೀಗಾಗಿ ಈ ವರ್ಷವೂ ದಾಖಲೆ ಪ್ರಮಾಣದಲ್ಲಿ ಕೃಷಿ ಚಟುವಟಿಕೆಯಾಗಬಹುದು ಎಂಬುದು ರಾಜ್ಯ ಸರ್ಕಾರದ ಆಶಾಭಾವನೆ.

ಕಳೆದ ವರ್ಷ ಮುಂಗಾರು ಹಂಗಾಮಿನಲ್ಲಿ ನಿಗದಿತ ಗುರಿಗಿಂತ ಶೇ.4ರಷ್ಟು ಹೆಚ್ಚಿನ ಪ್ರದೇಶದಲ್ಲಿ ಬಿತ್ತನೆಯಾಗಿತ್ತು. 73 ಲಕ್ಷ ಹೆಕ್ಟೇರ್ ಬಿತ್ತನೆಯ ಗುರಿ ಇದ್ದದ್ದು 77.65 ಲಕ್ಷ ಹೆಕ್ಟೇರ್ ಬಿತ್ತನೆಯಾಗಿತ್ತು. ಕೃಷಿ ಇಲಾಖೆ 32 ಲಕ್ಷ ಹೆಕ್ಟೇರ್ ಬಿತ್ತನೆಯ ಗುರಿ ಹೊಂದಿದ್ದರೂ, 27.10 ಲಕ್ಷ ಹೆಕ್ಟೇರ್ ಅಂದರೆ ಶೇ 85ರಷ್ಟು ಗುರಿ ಸಾಧಿಸಲಾಗಿತ್ತು. ಬೇಸಿಗೆಯಲ್ಲಿ ಮತ್ತೆ 5 ಲಕ್ಷ ಹೆಕ್ಟೇರ್ ಬಿತ್ತನೆ ಗುರಿ ಹೊಂದಿದ್ದು 5.02 ಲಕ್ಷ ಹೆಕ್ಟೇರ್ ಬಿತ್ತನೆಯಾಗಿ ಶೇ.100ರಷ್ಟು ಗುರಿ ಸಾಧಿಸಲಾಗಿತ್ತು.

ಗ್ರಾಮಗಳಿಗೆ ತೆರಳಿ ಕೃಷಿಯಲ್ಲಿ ತೊಡಗಿಕೊಂಡವರಿಗೆ ರಾಜ್ಯ ಸರ್ಕಾರ ಸಹಕಾರಿ ಸಂಘಗಳ ಮೂಲಕ ಸುಮಾರು 5 ಲಕ್ಷ ರೈತರಿಗೆ ಹೊಸದಾಗಿ ಸಾಲವನ್ನೂ ನೀಡುವ ವ್ಯವಸ್ಥೆ ಮಾಡಿ ಕೃಷಿ ಕ್ಷೇತ್ರಕ್ಕೆ ಉತ್ತೇಜನ ನೀಡುವ ಕೆಲಸ ಮಾಡಲಾಗಿತ್ತು. ಅದರ ಪರಿಣಾಮ ಆಹಾರ ಉತ್ಪಾದನೆಯಲ್ಲಿಯೂ ನಿರೀಕ್ಷಿತ ಗುರಿಗಿಂತ ಹೆಚ್ಚಿನ ಉತ್ಪಾದನೆ ಸಾಧಿಸಲಾಗಿತ್ತು. ಇದೇ ಮೇಳೆ, ಅರ್ಥ ವ್ಯವಸ್ಥೆಯ ಇತರ ಎಲ್ಲಾ ಕ್ಷೇತ್ರಗಳೂ ಋಣಾತ್ಮಕ ಬೆಳವಣಿಗೆ ದಾಖಲಿಸಿದ್ದರೆ, ಕೃಷಿ ಕ್ಷೇತ್ರ ಮಾತ್ರ ಚೇತೋಹಾರಿ ಅಭಿವೃದ್ಧಿ ಸಾಧಿಸಿತ್ತು.

ಮುಂಗಾರು ಹಂಗಾಮಿನಲ್ಲಿ ರೈತರಿಗೆ ಬಿತ್ತನೆಗೆ ಯಾವುದೇ ರೀತಿಯ ಸಮಸ್ಯೆಯಾಗದಂತೆ ನೋಡಿಕೊಳ್ಳಲು ಮುಖ್ಯಮಂತ್ರಿ ಯಡಿಯೂರಪ್ಪ ಸೂಚನೆ ನೀಡಿದ್ದಾರೆ. ಅದರಂತೆ ನಮ್ಮ ಇಲಾಖೆ ಎಲ್ಲ ರೀತಿಯ ಸಿದ್ಧತೆ ಮಾಡಿಕೊಂಡಿದೆ. ಈ ವರ್ಷ 30 ಲಕ್ಷ ರೈತರಿಗೆ 20 ಸಾವಿರ ಕೋಟಿ ಸಾಲ ನೀಡುವ ಗುರಿ ಹಾಕಿಕೊಂಡಿದ್ದೇವೆ.
• ಎಸ್.ಟಿ.ಸೋಮಶೇಖರ್, ಸಹಕಾರ ಸಚಿವ.

ದಾಖಲೆ ಉತ್ಪಾದನೆ ಗುರಿ: ಹೆಚ್ಚಿನ ಮಂದಿ ಕೃಷಿ ಕ್ಷೇತ್ರಕ್ಕೆ ವಾಪಸಾಗಿದ್ದರಿಂದ ಸಾಗುವಳಿ ಭೂಮಿಯ ಪ್ರಮಾಣವೂ ಹೆಚ್ಚಾಗಿದೆ. ಇದರ ಪರಿಣಾಮ ಈ ವರ್ಷ ಅಂದರೆ 2021-22 ನೇ ಹಂಗಾಮು ವರ್ಷದಲ್ಲಿ ಕೃಷಿ ಇಲಾಖೆ ಹೆಚ್ಚಿನ ಬಿತ್ತನೆಯ ಗುರಿ ಇಟ್ಟುಕೊಂಡಿದೆ. ಮುಂಗಾರು ಹಂಗಾಮಿನಲ್ಲಿ 77 ಲಕ್ಷ ಹೆಕ್ಟೇರ್ ಬಿತ್ತನೆಯ ಗುರಿ ಹೊಂದಲಾಗಿದೆ. ಪೂರ್ವ ಮುಂಗಾರು ಮುಂಚಿತವಾಗಿಯೇ ಆರಂಭವಾಗಿರುವುದರಿಂದ ರೈತರು ಕೃಷಿ ಚಟುವಟಿಕೆಗಳನ್ನು ಆರಂಭಿಸಿದ್ದು ಬಿತ್ತನೆಗೆ ಎಲ್ಲ ರೀತಿಯ ಸಿದ್ಧತೆ ಮಾಡಿಕೊಳ್ಳುತ್ತಿದ್ದಾರೆ.

27-04-2021
Uv Pg 01

For more information visit
University Library Website
Web - uasbagrilibindia.org
E-mail- librarian@uasbangalore.edu.in

"Let your past make you better not bitter"

UASB LIBRARY
Newspaper Clippings
Pg .2 Tuesday 27-04-2021 Jai Kisan



ಸಂಚಾರಿ ಸಸ್ಯ ಆರೋಗ್ಯ ಚಿಕಿತ್ಸಾ ಕೃಷಿ ಸಂಜೀವಿನಿ ಯೋಜನೆ: ಸ್ಥಳದಲ್ಲೇ ಮಣ್ಣು ಪರೀಕ್ಷೆ, ಕೀಟ ನಾಶಕ ಕುರಿತು ಮಾಹಿತಿ

ರೈತರ ಜಮೀನು ಬಳಿ ಬರುವರು ಕೃಷಿ ಅಧಿಕಾರಿಗಳು!

• ದಿಗಂತ ವರದಿ, ಉಡುಪಿ

ಸದಾ ಗದ್ದೆ-ತೋಟಗಳಲ್ಲಿ ದುಡಿಯುವ ರೈತರು ಇನ್ನು ಅಧಿಕಾರಿಗಳನ್ನು ಹುಡುಕಿ ಕಚೇರಿಗಳಿಗೆ ಅಲೆ ಯಬೇಕಾಗಿಲ್ಲ. ಬದಲಿಗೆ ಅಧಿಕಾರಿಗಳೇ ರೈತರ ಕೃಷಿ ಭೂಮಿಗೆ ಬರಲಿದ್ದಾರೆ. ಅದಕ್ಕಾಗಿ ಸಂಚಾರಿ ಸಸ್ಯ ಆರೋಗ್ಯ ಚಿಕಿತ್ಸಾಲಯ ಕೃಷಿ ಸಂಜೀವಿನಿ ಯೋಜನೆ ಯನ್ನು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಸರಕಾರ ಅನುಷ್ಠಾನ ಗೊಳಿಸಲಾಗಿದೆ.

ಕೃಷಿ ಸಂಜೀವಿನಿ ರೈತ ಸಹಾಯವಾಣಿ ಟೋಲ್ ಫ್ರೀ ಸಂಖ್ಯೆ 155513 ಗೆ ರೈತರು ಒಂದು ಫೋನ್ ಕರೆ ಮಾಡಿದ್ದಲ್ಲಿ ಅಧಿಕಾರಿಗಳು, ಸಿಬ್ಬಂದಿಯೇ ರೈತರ ಮನೆ ಬಾಗಿಲಿಗೆ, ಜಮೀನುಗಳಿಗೆ ಬಂದು, ಕೃಷಿ ಸಂಬಂಧಿತ ಅಗತ್ಯ ಸಲಹೆ, ಸೂಚನೆ, ಸಮಸ್ಯೆಗೆ ಪರಿಹಾರ ನೀಡುವರು.

ಮಣ್ಣು ಪರೀಕ್ಷೆ: ಬೆಳೆಗೆ ಕೀಟ ನಿಯಂತ್ರಣ, ರೋಗ ಮತ್ತು ಕಳೆಗಳ ಬಾಧೆ ಹಾಗೂ ಮಣ್ಣಿನ ಪೋಷಕಾಂಶ ಕೊರತೆ, ಮಣ್ಣು ಪರೀಕ್ಷೆ ಹಾಗೂ ಸಮರ್ಪಕ ನಿರ್ವಹಣೆ ಕುರಿತಂತೆ ರೈತರ ಜಮೀನುಗಳಲ್ಲಿಯೇ ಪರೋಟಿ ಕ್ರಮಗಳ ಕುರಿತು ಮಾರ್ಗೋಪಾಯಗಳನ್ನು ಒದಗಿಸುವರು.

ಟೋಲ್ ಫ್ರೀಗೆ ಕರೆ ಮಾಡಿದೆ ಸಾಕು: ಜಿಲ್ಲೆಯ ಯಾವುದೇ ಸ್ಥಳದಿಂದ ಈ ಟೋಲ್ ಫ್ರೀ ಸಂಖ್ಯೆಗೆ ಕರೆ ಮಾಡಿದರೆ, ಈ ಕರೆಯು ಕೃಷಿ ಇಲಾಖೆಯ ಬೆಂಗಳೂರು ಕಚೇರಿಗೆ ಹೋಗಲಿದೆ. ಅಲ್ಲಿಂದ ಜಿಲ್ಲೆಯ ಜಂಟಿ ಕೃಷಿ ನಿರ್ದೇಶಕರ ಕಚೇರಿಗೆ ಮಾಹಿತಿ ತಲುಪಲಿದೆ. ಅಲ್ಲಿಂದ ಜಿಲ್ಲೆಯಲ್ಲಿರುವ ಕೃಷಿ ಸಂಜೀವಿನಿ ವಾಹನಕ್ಕೆ ಕರೆ ಮಾಡಿದ ಸಂಬಂಧಪಟ್ಟ ರೈತರ ವಿಳಾಸ, ದೂರವಾಣಿ ಸಂಖ್ಯೆ ಮತ್ತು ಸಮಸ್ಯೆಗಳ ಕುರಿತು ಮಾಹಿತಿ ರವಾನೆಯಾಗುತ್ತದೆ. ನಂತರ ಅಧಿಕಾರಿಗಳು ರೈತರ ವಿಳಾಸಕ್ಕೆ ತೆರಳಿ ಪರಿಶೀಲನೆ ನಡೆಸಿ, ಅಗತ್ಯ ಸಲಹೆ ಸೂಚನೆ ನೀಡಲಿದ್ದಾರೆ.

ವಾಹನದಲ್ಲಿಹಲವುಉಪಯುಕ್ತಮಾಹಿತಿ: ಉಡುಪಿ ಜಿಲ್ಲೆಗೆ ನೀಡಿರುವ ಕೃಷಿ ಸಂಜೀವಿನಿ ವಾಹನದಲ್ಲಿ, ಮಣ್ಣು ಪರೀಕ್ಷೆ ನಡೆಸುವ ಯಂತ್ರ ಸೇರಿದಂತೆ ಅಗತ್ಯ ಉಪಕರಣಗಳನ್ನು ಅಳವಡಿಸಲಾಗಿದೆ. ಸಮಸ್ಯೆ ಕುರಿತು ಕರೆ ಮಾಡುವ ರೈತರ ಜಮೀನಿಗೆ ತೆರಳಲಿರುವ ವಾಹನ ಮತ್ತು ಸಮಸ್ಯೆಗಳ ಕುರಿತು ಪರಿಶೀಲನೆ ನಡೆಸಲು ಇದೇ ಉದ್ದೇಶಕ್ಕಾಗಿ ನಿಯೋಜಿಸಿರುವ ಕೃಷಿ ಡಿಪ್ಲೊಮಾ ಪಡೆದ ಸಿಬ್ಬಂದಿ ಹಾಗೂ ಸಂಬಂಧಪಟ್ಟ ವ್ಯಾಪ್ತಿಯ ಕೃಷಿ ಇಲಾಖೆ ಅಧಿಕಾರಿಗಳು, ರೈತರಿಗೆ ಅವರ ಸ್ಥಳದಲ್ಲಿಯೇ ಮಣ್ಣಿನ ಆರೋಗ್ಯ ಸಂಬಂಧಿತ ಸಮಸ್ಯೆಯ ಪರೀಕ್ಷೆ ನಡೆಸುವುದು ಸೇರಿದಂತೆ ಕೃಷಿ ಸಂಬಂಧಿತ ಎಲ್ಲ ಸಮಸ್ಯೆಗಳಿಗೆ ಅಗತ್ಯ ಸಲಹೆ ಸೂಚನೆ ನೀಡುವುದರ ಮೂಲಕ, ಕೃಷಿ ಚಟುವಟಿಕೆಗಳಿಗೆ ಇರುವ ತೊಂದರೆಗಳ ನಿವಾರಣೆ ಮಾಡಲಿದ್ದಾರೆ.

ಗುಣಮಟ್ಟದ ಕೃಷಿ ಉಪಕರಣ

ರೈತರಿಗೆ ಸುಧಾರಿತ ಕೃಷಿ ಉತ್ಪಾದನಾ ತಾಂತ್ರಿಕತೆ, ಗುಣಮಟ್ಟದ ಕೃಷಿ ಪರಿಕರಗಳ ಪೂರೈಕೆ ಮತ್ತು ರಸಗೊಬ್ಬರಗಳ ಸಮರ್ಪಕ ಬಳಕೆ, ರೋಗ - ಕೀಟಗಳ ಹತೋಟಿ, ಮಣ್ಣಿನಲ್ಲಿ ಲಭ್ಯವಿರುವ ಪೋಷಕಾಂಶಗಳ ಬಗ್ಗೆ ರೈತರಿಗೆ ಮಾಹಿತಿ ಒದಗಿಸಿ, ಸೂಕ್ತ ಬೆಳೆ ಬೆಳೆಯಲು ಪ್ರೋತ್ಸಾಹಿಸುವುದು ಕೃಷಿ ಇಲಾಖೆಯ ಪ್ರಮುಖ ಕರ್ತವ್ಯವಾಗಿದೆ.



ಕೃಷಿ ಸಂಜೀವಿನಿ ಮೂಲಕ, ಬೆಳೆಗೆ ತಗಲುವ ಕೀಟ , ರೋಗ, ಕಳೆಗಳ ನಿರ್ವಹಣಾ ಮಾರ್ಗೋಪಾಯವನ್ನು ರೈತರಿಗೆ ಸಕಾಲದಲ್ಲಿ ತಿಳಿಸುವುದು ಪ್ರಮುಖ ಉದ್ದೇಶವಾಗಿದೆ. ರೈತರ ಜಮೀನಿನಲ್ಲಿರುವ ಕೃಷಿ ಸಂಬಂಧಿತ ಸಮಸ್ಯೆಯನ್ನು ಬಗೆಹರಿಸಿಕೊಂಡು, ಉತ್ತಮ ಗುಣಮಟ್ಟದ ಇಳುವರಿ ಪಡೆಯಲು ಸಾಧ್ಯವಾಗಲಿದೆ.

■ ಡಾ. ಕೆಂಪೇಗೌಡ, ಕೃಷಿ ಇಲಾಖೆಯ ಜಂಟಿ ನಿರ್ದೇಶಕರು, ಉಡುಪಿ,

27-04-2021 Hd Pg 02